ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ಮೀಸಲಾತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ　　ದಿನಾಂಕ : DATE : 28/8/2020

ಕುತೂಹಲ 2004ರ ತೀರ್ಪು ಮರುಪರಿಶೀಲನೆ

# ರಾಜ್ಯಗಳಿಗೆ ಒಳಮೀಸಲು ಅಧಿಕಾರ: ಸುಪ್ರೀಂ ಒಲವು

**ನವದೆಹಲಿ:** ಒಳಮೀಸಲಿಗೆ ಸಂಬಂಧಿಸಿದ 2004ರ ತನ್ನದೇ ಆದೇಶವನ್ನು ಮರುಪರಿಶೀಲಿಸಲು ಸುಪ್ರೀಂಕೋರ್ಟ್ ತೀರ್ಮಾನಿಸಿದೆ. ಇದರಿಂದಾಗಿ ಒಳಮೀಸಲು ಕುರಿತಾದ ಚರ್ಚೆ ಮತ್ತೆ ಮರುಜೀವ ಪಡೆದಿದೆ. 2004ರಲ್ಲಿ ಸುಪ್ರೀಂಕೋರ್ಟ್



ಸಾಂವಿಧಾನಿಕ ಪೀಠವು, 'ಉದ್ಯೋಗ ಹಾಗೂ ಶಿಕ್ಷಣದಲ್ಲಿ ಮೀಸಲು ನೀಡುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಲ್ಲಿ ಉಪ-ವರ್ಗೀಕರಣ ಮಾಡುವ (ಒಳ ಮೀಸಲು ನೀಡುವ) ಅಧಿಕಾರ ರಾಜ್ಯ ಸರ್ಕಾರಗಳಿಗಿಲ್ಲ' ಎಂದು ತೀರ್ಪು ನೀಡಿತ್ತು. ಗುರುವಾರ ಈ ಕುರಿತು ಪಂಜಾಬ್ ಸರ್ಕಾರ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ ಪಂಚಸದಸ್ಯ ಪೀಠ, 'ಈ ಕುರಿತು ಮರುವಿಚಾರಣೆ ಅಗತ್ಯವಿದೆ. 2004ರಲ್ಲಿ ಈ ಬಗ್ಗೆ ನ್ಯಾಯಾಲಯ ಸೂಕ್ತ ನಿರ್ಧಾರ ಕೈಗೊಂಡಿಲ್ಲ. ಎಸ್‌ಸಿ-ಎಸ್‌ಟಿಯಲ್ಲೇ ಉಪವರ್ಗೀಕರಣ ಮಾಡಿ ನಿರ್ದಿಷ್ಟ ಸಮುದಾಯಗಳಿಗೆ ಪ್ರಾತಿನಿಧ್ಯ ನೀಡುವ ಕಾನೂನು ರೂಪಿಸಲು ರಾಜ್ಯ ಸರ್ಕಾರಗಳಿಗೆ ಅನುವು ಮಾಡಿಕೊಡಬೇಕು' ಎಂದು ಪೀಠ ಅಭಿಪ್ರಾಯಪಟ್ಟಿತು.